# ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ : ಕೇಂದ್ರ ಕಛೇರಿ : ಬೆಂಗಳೂರು

ಸಂ:ಬೆಂಮಸಾ/ಕೇಕ/ನೇಮಕ/ಶಿಶಿಕ್ಷು/ 9780 /2021-22 ದಿನಾಂಕ: 25/02/2022

## ಶಿಶಿಕ್ಷು ಜಾಹೀರಾತು ಸಂಖ್ಯೆ:01/2022

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಲ್ಲಿ ಶಿಶಿಕ್ಷು ಕಾಯ್ದೆ 1961ರ ಪ್ರಕಾರ ಫೆಬ್ರವರಿ-2022ರ ಅಧಿವೇಶನಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ತಾಂತ್ರಿಕ ವೃತ್ತಿಗಳಲ್ಲಿ ಪೂರ್ಣಾವಧಿ ಶಿಶಿಕ್ಷು ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಅಂತರಜಾಲ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

| ಕ್ರಮ ಸಂಖ್ಯೆ | ವೃತ್ತಿಯ ಹೆಸರು | ತರಬೇತಿ ಅವಧಿ | | ಒಟ್ಟು ಹುದ್ದೆಗಳು |
|---|---|---|---|---|
| | | ಎಸ್.ಎಸ್.ಎಲ್.ಸಿ ತೇರ್ಗಡೆಹೊಂದಿದ್ದಲ್ಲಿ | ಐಟಿಐ ತೇರ್ಗಡೆಹೊಂದಿದ್ದಲ್ಲಿ | |
| 1 | ಮೆಕಾನಿಕ್ ಡೀಸೆಲ್ | 2 ವರ್ಷ | 1 ವರ್ಷ | 250 |
| 2 | ಫಿಟ್ಟರ್ | 2 ವರ್ಷ | 1 ವರ್ಷ | 50 |

**I)** **ವಯೋಮಿತಿ** : ದಿನಾಂಕ: **30-03-2022** ರಂದು ಕನಿಷ್ಠ **16** ವರ್ಷ ತುಂಬಿರಬೇಕು ಮತ್ತು **26** ವರ್ಷ ಮೀರಿರಬಾರದು.

**II)** **ವಿದ್ಯಾರ್ಹತೆ :**

ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅಥವಾ ಐಟಿಐ (ಮೆಕಾನಿಕ್ ಡೀಸಲ್ ಹಾಗೂ ಫಿಟ್ಟರ್ ವೃತ್ತಿ)ಯಲ್ಲಿ ಉತ್ತೀರ್ಣರಾಗಿರಬೇಕು.

**III)** **ತರಬೇತಿ ಭತ್ಯೆ**: ಆಯ್ಕೆಗೊಂಡ ಶಿಶಿಕ್ಷು ಆರ್ಭ್ಯರ್ಥಿಗಳಿಗೆ ಈ ಕೆಳಕಂಡಂತೆ ಮಾಸಿಕ ತರಬೇತಿ ಭತ್ಯೆ ನೀಡಲಾಗುವುದು.

| ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿರುವ ಅಭ್ಯರ್ಥಿಗಳಿಗೆ | ಐ.ಟಿ.ಐ ತೇರ್ಗಡೆ ಹೊಂದಿರುವ ಅಭ್ಯರ್ಥಿಗಳಿಗೆ |
|---|---|
| **₹6000/-** | **₹7000/-** |

**IV)** ಅಭ್ಯರ್ಥಿಗಳು ಅಂತರಜಾಲ ಪೋರ್ಟಲ್ www.apprenticeshipindia.gov.in ನಲ್ಲಿ ಸಲ್ಲಿಸಿರುವ ಅರ್ಜಿಯ ಪ್ರತಿಯೊಂದಿಗೆ, ಇತ್ತೀಚಿನ 02 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರ ಮತ್ತು ಸಂಬಂಧಪಟ್ಟ ಎಲ್ಲಾ ಮೂಲ ದಾಖಲಾತಿಗಳಾದ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಆಧಾರ್ ಲಿಂಕ್ ಬ್ಯಾಂಕ್ ಖಾತೆಯ ಪ್ರತಿ, ಐ.ಟಿ.ಐ ತೇರ್ಗಡೆ ಹೊಂದಿದ್ದಲ್ಲಿ ಅದರ ಮೂಲ ಅಂಕಪಟ್ಟಿಗಳೊಂದಿಗೆ ದಿನಾಂಕ:**30/03/2022 ರಂದು** ಬೆಳಿಗ್ಗೆ 10.30 ಗಂಟೆಯಿಂದ 5.00 ಗಂಟೆಯೊಳಗಾಗಿ **ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ತರಬೇತಿ ಕೇಂದ್ರ,, 2ನೇ ಮಹಡಿ, ಶಾಂತಿನಗರ ಬಸ್ ನಿಲ್ದಾಣ, ಬೆಂಗಳೂರು-560027,** ಇಲ್ಲಿ ಖುದ್ದಾಗಿ ಮೂಲ ದಾಖಲಾತಿಗಳ ಪರಿಶೀಲನೆಗೆ ಹಾಜರಾಗತಕ್ಕದ್ದು ಹಾಗೂ ಮೂಲ ದಾಖಲಾತಿಗಳ ಒಂದು ಸೆಟ್ ಜೆರಾಕ್ಸ್ ಪ್ರತಿಗಳನ್ನು ಸಹ ತರುವುದು. ಅಪೂರ್ಣ ಅಥವಾ ವಿಳಂಬವಾಗಿ ಸಲ್ಲಿಸುವ ಅರ್ಜಿಗಳನ್ನು ಆಯ್ಕೆಗೆ ಪರಿಗಣಿಸಲಾಗುವುದಿಲ್ಲ.

**V)** **ಅರ್ಜಿ ಸಲ್ಲಿಸುವ ವಿಧಾನ / ಸೂಚನೆಗಳು;-**

ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ನಿರ್ದೇಶನಾಲಯ, ನವ ದೆಹಲಿ ರವರು ಶಿಶಿಕ್ಷು ತರಬೇತಿ ಪಡೆಯಲು ಇಚ್ಛಿಸುವ ಅಭ್ಯರ್ಥಿಗಳು ಅಂತರಜಾಲ ಪೋರ್ಟಲ್ www.apprenticeshipindia.gov.inನಲ್ಲಿ ನೋಂದಣಿಗೊಳಿಸಿದ್ದಲ್ಲಿ ಮಾತ್ರ ಅವರುಗಳನ್ನು ನಿಯೋಜಿಸಿಕೊಳ್ಳಬೇಕೆಂದು ನಿರ್ದೇಶಿಸಿರುವುದರಿಂದ, ಅಭ್ಯರ್ಥಿಗಳು ಸದರಿ ಪೋರ್ಟಲ್‌ನಲ್ಲಿ ನೋಂದಣಿಗೊಳಿಸುವುದು ಕಡ್ಡಾಯವಾಗಿರುತ್ತದೆ.

1) ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ಅರ್ಜಿ ಸಲ್ಲಿಸುವಾಗ ಅವರ ಹೆಸರು, ತಂದೆ ಹೆಸರು, ತಾಯಿ ಹೆಸರು, ವಿಳಾಸ, ಹುಟ್ಟಿದ ದಿನಾಂಕ, ವಿದ್ಯಾರ್ಹತೆ, ಜಾತಿ, ಗುಂಪು ಮತ್ತು ಅಪೇಕ್ಷಿತ ವೃತ್ತಿಯ ಮಾಹಿತಿಯನ್ನು ಸ್ಪಷ್ಟವಾಗಿ ನಮೂಧಿಸಬೇಕು.
2) ಅಭ್ಯರ್ಥಿಗಳು ತಮ್ಮ ಪಾಸ್‌ಪೋರ್ಟ್ ಅಳತೆಯ ಇತ್ತೀಚಿನ ಭಾವಚಿತ್ರ, ಅಭ್ಯರ್ಥಿ ಸಹಿ, ಎಸ್‌ಎಸ್‌ಎಲ್‌ಸಿ ಮತ್ತು ಐಟಿಐ ಅಂಕಪಟ್ಟಿಗಳನ್ನು ಸ್ಕ್ಯಾನ್ **(scan)** ಮಾಡಿ ಅಪ್‌ಲೋಡ್ ಮಾಡತಕ್ಕದ್ದು.
3) ವಿದ್ಯಾರ್ಹತೆ ಆಯ್ಕೆ ಮಾಡುವಾಗ 10ನೇ ತರಗತಿ ಎಂದು ಅಥವಾ ಐಟಿಐ ತೇರ್ಗಡೆಹೊಂದಿದ್ದಲ್ಲಿ ಐಟಿಐ ಎಂದು ಆಯ್ಕೆ ಮಾಡುವುದು. ಇದನ್ನು ಹೊರತುಪಡಿಸಿ ಬೇರೆ ಯಾವುದೇ ವಿದ್ಯಾರ್ಹತೆಯನ್ನು ನಮೂದಿಸಬಾರದು.
4) ಐಟಿಐ ತೇರ್ಗಡೆಗೊಂಡಿರುವ ಅಭ್ಯರ್ಥಿಗಳು ಅವರು ಅಯ್ಕೆ ಮಾಡುವ ವೃತ್ತಿಯಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಮಾತ್ರ ಅವರಿಗೆ ಶಿಶಿಕ್ಷು ಕಾಯಿದೆ 1961ರ ಪ್ರಕಾರ ತರಬೇತಿ ಅವಧಿಯಲ್ಲಿ ರಿಯಾಯಿತಿ ಪಡೆಯಲು ಅರ್ಹರಾಗಿರುತ್ತಾರೆ. (ಉದಾಹರಣೆಗೆ ಫಿಟ್ಟರ್ ವೃತ್ತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಫಿಟ್ಟರ್ ವೃತ್ತಿಯಲ್ಲೇ ಐಟಿಐ ತೇರ್ಗಡೆ ಹೊಂದಿರಬೇಕು)
5) ಅಭ್ಯರ್ಥಿಯ ಆಧಾರ್ ಲಿಂಕ್ ಬ್ಯಾಂಕ್ ಖಾತೆ ಸಂಖ್ಯೆ, IFSC Code ಮತ್ತು ಬ್ಯಾಂಕ್ ಖಾತೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಸ್ಪಷ್ಟವಾಗಿ ನಮೂಧಿಸುವುದು.
6) ಅಭ್ಯರ್ಥಿಗಳಿಗೆ ತರಬೇತಿಗೆ ಸಂಬಂಧಪಟ್ಟ ಎಲ್ಲಾ ಮಾಹಿತಿಯನ್ನು ಪೋರ್ಟಲ್/ವೆಬ್‌ಸೈಟ್ ಮೂಲಕ ನೇರವಾಗಿ ಅವರ email-idಗೆ ಕಳುಹಿಸಲಾಗುವುದರಿಂದ ಅಭ್ಯರ್ಥಿಗಳು ಅವರ ಸ್ವಂತ email-id ಮತ್ತು ಮೊಬೈಲ್ ಸಂಖ್ಯೆಯನ್ನು ವೆಬ್‌ಸೈಟ್‌ನಲ್ಲಿ ಖಡ್ಡಾಯವಾಗಿ ನಮೂಧಿಸುವುದು / ನೀಡುವುದು.
7) ಅಭ್ಯರ್ಥಿಗಳು ವೆಬ್‌ಸೈಟ್‌ನಲ್ಲಿ ತರಬೇತಿ ಪಡೆಯುವ ಸಂಸ್ಥೆ ಮತ್ತು ಬಿಟಿಪಿ **(Establishment and Basic Training Provider (BTP)** ಆಯ್ಕೆ ಮಾಡುವಾಗ **Bangalore Metropolitan Transport Corporation**ನ್ನು ಆಯ್ಕೆ ಮಾಡಿಕೊಳ್ಳುವುದು.

**VI) <u>ಸೂಚನೆಗಳು:-</u>**

1) ಅಭ್ಯರ್ಥಿಗಳು ಈಗಾಗಲೇ ಶಿಶಿಕ್ಷು ಕಾಯ್ದೆ 1961 ರನ್ವಯ ಶಿಶಿಕ್ಷು ತರಬೇತಿ ಪಡೆದಿರುವವರು ಪುನಃ ಅರ್ಜಿ ಸಲ್ಲಿಸಲು ಅರ್ಹರಲ್ಲ.
2) ಶಿಶಿಕ್ಷು ತರಬೇತಿ ಪಡೆಯುವ ಅಭ್ಯರ್ಥಿಗಳು ತಮ್ಮ ತರಬೇತಿ ಪೂರ್ಣಗೊಳಿಸಿದ ನಂತರ ಸಂಸ್ಥೆಯಲ್ಲಿ ಅವರಿಗೆ ಯಾವುದೇ ರೀತಿಯ ನೇಮಕಾತಿ ಮಾಡಿಕೊಳ್ಳುವ ಒಪ್ಪಂದಕ್ಕೆ ಒಳಪಟ್ಟಿರುವುದಿಲ್ಲ ಮತ್ತು ತರಬೇತಿ ಪಡೆಯಲು ಅರ್ಹತೆ ಪಡೆದವರು ಶಿಶಿಕ್ಷು ಕಾಯ್ದೆ 1961ರ ನಿಯಮಗಳು, ನಿಬಂಧನೆ ಮತ್ತು ಷರತ್ತುಗಳಿಗೆ ಒಳಪಟ್ಟಿರುತ್ತಾರೆ.
3) ತಾಂತ್ರಿಕ ಶಿಶಿಕ್ಷು ತರಬೇತಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಉತ್ತಮ ದೇಹದಾರ್ಢ್ಯತೆ ಹೊಂದಿರಬೇಕು.
4) ಒಂದಕ್ಕಿಂತ ಹೆಚ್ಚಿನ ವೃತ್ತಿಗಳಿಗೆ ಅರ್ಜಿ ಸಲ್ಲಿಸಲು ಬಯಸುವ ಆಭ್ಯರ್ಥಿಗಳು ಪ್ರತಿಯೊಂದು ವೃತ್ತಿಗಳಿಗೂ ಪ್ರತ್ಯೇಕ ಅರ್ಜಿ ಸಲ್ಲಿಸಬೇಕು. ಆಯ್ಕೆಗೆ ಸಂಬಂಧಿಸಿದಂತೆ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

-ಸಹಿ-

ಮುಖ್ಯ ಸಿಬ್ಬಂದಿ ವ್ಯವಸ್ಥಾಪಕರು

ಪ್ರತಿಯನ್ನು:-

1) ಜಂಟಿ ನಿರ್ದೇಶಕರು, ತಾಂತ್ರಿಕ ಶಿಶಿಕ್ಷು ಸಲಹೆಗಾರರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಕೌಶಲ್ಯ ಭವನ, ಹೊಸೂರು ರಸ್ತೆ, ಬೆಂಗಳೂರು ಇವರ ಮಾಹಿತಿಗಾಗಿ.
2) ಆಪ್ತಕಾರ್ಯದರ್ಶಿಗಳು : ವ್ಯವಸ್ಥಾಪಕ ನಿರ್ದೇಶಕರು : ನಿರ್ದೇಶಕರು (ಭ & ಜಾ) : ಮುಖ್ಯ ತಾಂತ್ರಿಕ ಅಭಿಯಂತರರು (ಉತ್ಪಾದನೆ) : ಮುಖ್ಯ ಲೆಕ್ಕಾಧಿಕಾರಿ ಹಗೂ ಆರ್ಥಿಕ ಸಲಹೆಗಾರರು ಮತ್ತು ಎಲ್ಲಾ ಇಲಾಖಾ ಮುಖ್ಯಸ್ಥರು ಬೆಂ.ಮ.ಸಾ.ಸಂಸ್ಥೆ, ಬೆಂಗಳೂರು ರವರುಗಳ ಮಾಹಿತಿಗಾಗಿ.
3) ವಿಭಾಗ ನಿಯಂತ್ರಣಾಧಿಕಾರಿಗಳು, ಪೂರ್ವ, ಪಶ್ಚಿಮ, ಉತ್ತರ, ದಕ್ಷಿಣ ಮತ್ತು ಕೇಂದ್ರೀಯಾ ವಲಯ ರವರುಗಳ ಮಾಹಿತಿಗಾಗಿ.
4) ಕಾರ್ಯ ವ್ಯವಸ್ಥಾಪಕರು / ವಿಭಾಗೀಯ ತಾಂತ್ರಿಕ ಅಭಿಯಂತರರು, ಕೇಂದ್ರಿಯಾ ಕಾರ್ಯಗಾರ 1,2,3&4 ಮತ್ತು ಎಲ್ಲಾ ಘಟಕ ವ್ಯವಸ್ಥಾಪಕರುಗಳ ಮಾಹಿತಿಗಾಗಿ ಹಾಗೂ ಈ ಜಾಹೀರಾತಿನ ಪ್ರತಿಯನ್ನು ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.